SEPTEMBER **12,2024**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

<><><>

**ಮುಖ್ಯಾಂಶಗಳು:**

- **ಹಿಂದಿನ ಸರ್ಕಾರದ ಅವಧಿಯಲ್ಲಿ ನಡೆದಿರುವ ಹಗರಣಗಳ ತನಿಖೆಯ ಪ್ರಗತಿ ಪರಿಶೀಲನೆಗೆ ಉಪ ಸಮಿತಿ ರಚಿಸಲಾಗಿದೆ –ಮುಖ್ಯಮಂತ್ರಿ ಸಿದ್ದರಾಮಯ್ಯ.**

- **'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಶಿಕ್ಷಣ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆ – ಸಚಿವ ಮಧು ಬಂಗಾರಪ್ಪ.**

- **ಇದೇ 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆ, ಮಾನವ ಸರಪಳಿ ನಿರ್ಮಿಸಲು ಜಿಲ್ಲಾಡಳಿತಗಳ ಸಿದ್ಧತೆ.**

- **ಪ್ಲಾಸ್ಟಿಕ್ ಮರು ಬಳಕೆಗೆ ಹೆಚ್ಚಿನ ಒತ್ತು ಅಗತ್ಯ –ವಿಧಾನಸಭಾಧ್ಯಕ್ಷ ಯು.ಟಿ.ಖಾದರ್.**

<><><>

**ಈಗ ವಾರ್ತೆಗಳ ವಿವರ**

<><><>

**ಹಿಂದಿನ ಸರ್ಕಾರದ ಅವಧಿಯಲ್ಲಿ ನಡೆದಿರುವ 21 ಹಗರಣಗಳ ತನಿಖೆಯ ಪ್ರಗತಿ ಪರಿಶೀಲನೆಗೆ ಗೃಹಸಚಿವ ಡಾಕ್ಟರ್ ಜಿ.ಪರಮೇಶ್ವರ್ ನೇತೃತ್ವದಲ್ಲಿ ಉಪ ಸಮಿತಿ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪಸಮಿತಿಯಲ್ಲಿ ನಾಲ್ವರು ಸಚಿವರಿದ್ದಾರೆ. ಎರಡು ತಿಂಗಳ ಒಳಗೆ ವರದಿ ನೀಡಲು ಸೂಚಿಸಲಾಗಿದೆ. ಕೆಲವು ಹಗರಣಗಳಿಗೆ ನ್ಯಾಯಾಂಗ ತನಿಖೆಯನ್ನು, ಇನ್ನೂ ಕೆಲವಕ್ಕೆ ವಿಶೇಷ ತನಿಖಾ ದಳವನ್ನು ರಚಿಸಲಾಗಿದೆ. ಬಾಕಿ ಉಳಿದಿರುವ ಪ್ರಕರಣಗಳ ವಿಚಾರಣೆಗೆ ಉಪಸಮಿತಿಯ ವರದಿ ಆಧರಿಸಿ, ಕ್ರಮ ಕೈಗೊಳ್ಳಲಾಗುವುದು ಎಂದರು. ತಾವು ದ್ವೇಷದ ರಾಜಕಾರಣ ಮಾಡುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಪಿ.ಎಸ್.ಐ. ನೇಮಕಾತಿ ಹಗರಣಕ್ಕೆ ಸಂಬಂಧಿಸಿ ನ್ಯಾಯಮೂರ್ತಿ ಬಿ.ವೀರಪ್ಪ ಆಯೋಗದ ವರದಿ ಕುರಿತು ಕ್ರಮ ಕೈಗೊಳ್ಳಲು ವಿಶೇಷ ತನಿಖಾ ತಂಡ ರಚಿಸಲಾಗುವುದು. ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ನಿಗಮದ**

ಹಣ ವರ್ಗಾವಣೆ ಕುರಿತು ತನಿಖೆ ನಡೆಯುತ್ತಿದ್ದು, ನ್ಯಾಯಾಲಯ ತನಿಖಾ ವರದಿಗಳನ್ನು ಆಧರಿಸಿ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

<><><>

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿರುವ ಹಗರಣಗಳ ತನಿಖೆಯ ಪ್ರಗತಿ ಪರಿಶೀಲನೆಗಾಗಿ ರಚಿಸಲಾಗಿರುವ ಸಚಿವ ಸಂಪುಟ ಉಪ ಸಮಿತಿ ಸಭೆ ಮುಂದಿನ ವಾರ ನಡೆಸುವುದಾಗಿ ಸಮಿತಿಯ ಅಧ್ಯಕ್ಷರೂ ಆಗಿರುವ ಗೃಹ ಸಚಿವ ಡಾಕ್ಟರ್ ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವು ಪ್ರಕರಣಗಳು ತನಿಖೆಯಲ್ಲಿವೆ. ಇನ್ನೂ ಕೆಲವು ಬಾಕಿಯಿವೆ. ಯಾವ ಪ್ರಕರಣವು ನನೆಗುದಿಗೆ ಬೀಳಬಾರದು ಎಂಬ ಕಾರಣಕ್ಕಾಗಿ ತನಿಖೆಯ ಸ್ಥಿತಿಗತಿಗಳ ಬಗ್ಗೆ ಪರಿಶೀಲನೆ ನಡೆಸಿ, ಸಚಿವ ಸಂಪುಟಕ್ಕೆ ವರದಿ ನೀಡಲಾಗುವುದು ಎಂದರು. ಮಹರ್ಷಿ ವಾಲ್ಮೀಕಿ ಪರಿಶಿ ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣವನ್ನು ಸಿಐಡಿ ಮತ್ತು ಜಾರಿ ನಿರ್ದೇಶನಾಲಯ ಪ್ರತ್ಯೇಕ ತನಿಖೆ ನಡೆಸುತ್ತಿವೆ. ಅಂತಿಮವಾಗಿ ನ್ಯಾಯಾಲಯ ತನಿಖಾ ವರದಿಯನ್ನು ಆಧರಿಸಿ ಪ್ರಕರಣವನ್ನು ಇತ್ಯರ್ಥಪಡಿಸಲಿದೆ ಎಂದು ಹೇಳಿದರು.

<><><>

'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮ, ಶಿಕ್ಷಣ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ತನ್ಮೂಲಕ, ಸರಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಬದ್ಧತೆ ಹೊಂದಿದ್ದೇವೆ ಎಂದು, ಶಾಲಾ ಶಿಕ್ಷಣ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಬೆಳಗಾವಿ ಸುವರ್ಣಸೌಧದಲ್ಲಿ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮದ ಲೋಗೋವನ್ನು, ವಿದ್ಯಾರ್ಥಿಗಳಿಂದ ಅನಾವರಣಗೊಳಿಸಿ, ದಾನಿಗಳಿಗೆ ಗೌರವ ಸಮರ್ಪಿಸಿ, ಸಚಿವರು ಮಾತನಾಡಿದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಾವಿರದ ಎಂಟು, ಎಲ್.ಕೆ.ಜಿ. ಯು.ಕೆ.ಜಿ. ತರಗತಿಗಳನ್ನು ಪ್ರಾರಂಭಿಸಲಾಗಿದ್ದು, ಕ್ರಮೇಣ ರಾಜ್ಯಾದ್ಯಂತ ವಿಸ್ತರಿಸಲು ಕ್ರಮ ವಹಿಸಲಾಗುವದು ಎಂದರು.

ಕಳೆದ **10** ತಿಂಗಳಲ್ಲಿ **12** ಸಾವಿರದ **600** ಶಿಕ್ಷಕರ ನೇಮಕಾತಿ ಮಾಡಲಾಗಿದ್ದು, ಅನುದಾನಿತ ಖಾಸಗಿ ಶಾಲೆಗಳಲ್ಲಿ, **6** ಸಾವಿರ ಶಿಕ್ಷಕರ ನೇಮಕಾತಿಗೆ ಅನುಮತಿ ನೀಡಲಾಗಿದೆ. ದೈಹಿಕ ಹಾಗೂ ಸಂಗೀತ ಶಿಕ್ಷಕರ ನೇಮಕಾತಿಗೆ, ಯೋಜಿಸಲಾಗುತ್ತಿದೆ ಎಂದು ಹೇಳಿದರು. ಪೂರ್ವ ಪ್ರಾಥಮಿಕ ಶಾಲೆಯಿಂದ ಪದವಿ ಪೂರ್ವ ಕಾಲೇಜು ಹಂತದ ವರೆಗೆ ಮಕ್ಕಳು, ಒಂದೇ ಶಾಲೆಯಲ್ಲಿ ಓದಲಿ ಎಂಬ ಮಹತ್ವಾಕಾಂಕ್ಷೆಯಿಂದ, ಕರ್ನಾಟಕ ಪಬ್ಲಿಕ್ ಸ್ಕೂಲ್ ಮಾದರಿ ಜಾರಿಗೊಳಿಸಲಾಗಿದೆ. ಕಲ್ಯಾಣ ಕರ್ನಾಟಕದ ಯಾದಗಿರಿಯಲ್ಲಿ ಈ ಪ್ರಯೋಗ ಯಶಸ್ವಿಯಾಗಿದ್ದು, **40** ಸಾವಿರ ಮಕ್ಕಳು ಪ್ರವೇಶ ಪಡೆದುಕೊಂಡಿದ್ದಾರೆ. ಈ ಮಾದರಿಯನ್ನು ರಾಜ್ಯವ್ಯಾಪಿ ವಿಸ್ತರಿಸಲಾಗುವುದು ಎಂದು, ಸಚಿವ ಮಧು ಬಂಗಾರಪ್ಪ ಸುದ್ದಿಗೋಷ್ಠಿಯಲ್ಲಿ ಹೇಳಿದರು.

<><><>

ಕಾಡಂಚಿನಲ್ಲಿರುವ ಖಾನಾಪುರ ತಾಲ್ಲೂಕಿನ ಜನರಿಗೆ ಅತ್ಯುತ್ತಮ ವೈದ್ಯಕೀಯ ಸೌಲಭ್ಯ ಒದಗಿಸಲು ಅನುಕೂಲವಾಗುವಂತೆ **60** ಹಾಸಿಗೆಗಳ ತಾಯಿ-ಮಕ್ಕಳ ಆಸ್ಪತ್ರೆಯನ್ನು ನಿರ್ಮಿಸಲಾಗಿದೆ. ಅದೇ ರೀತಿಯಲ್ಲಿ ಆದ ್ಟು ಶೀಘ್ರದಲ್ಲೇ **100** ಹಾಸಿಗೆಗಳ ತಾಲ್ಲೂಕು ಆಸ್ಪತ್ರೆ ಕೂಡ ನಿರ್ಮಾಣವಾಗಲಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯ ಖಾನಾಪೂರ ಪಟ್ಟಣದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ನಿರ್ಮಿಸಲಾದ **60** ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ಉದ್ಘಾಟಿಸಿದ ಬಳಿಕ ನಬಾರ್ಡ ಆರ್.ಐಡಿಎಫ್-**30** ಯೋಜನೆಯಡಿಯಲ್ಲಿ **100** ಹಾಸಿಗೆಗಳ ತಾಲೂಕಾ ಸಾರ್ವಜನಿಕ ಆಸ್ಪತ್ರೆ ನಿರ್ಮಾಣ ಕಾಮಗಾರಿಯ ಶಂಕು ಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

<><><>

ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿ – 2025ಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಶೌರ್ಯ, ಕಲೆ ಮತ್ತು ಸಂಸ್ಕೃತಿ, ಪರಿಸರ ಸೇರಿದಂತೆ, ರಾಷ್ಟ್ರೀಯ ಮನ್ನಣೆಗೆ ಅರ್ಹವಾದ ಏಳು ವಿಭಾಗಗಳಲ್ಲಿ, 5 ರಿಂದ 18 ವ ೯ ವಯಸ್ಸಿನ ಮಕ್ಕಳಿಗೆ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ಅರ್ಜಿ ಸಲ್ಲಿಸಲು ಈ ತಿಂಗಳ 15 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ **www.awards.gov.in** ಜಾಲತಾಣಕ್ಕೆ ಭೇಟಿ ನೀಡಬಹುದು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆ, ಭಾನುವಾರ 15 ರಂದು, ತುಮಕೂರು ಜಿಲ್ಲೆ ಶಿರಾ ತಾಲೂಕಿನ ಉಜ್ಜನಕುಂಟೆ ಗ್ರಾಮದಿಂದ, ನಂದಿಹಳ್ಳಿ ಗ್ರಾಮದ ಗಡಿ ವರೆಗೆ, 90 ಕಿಲೋ ಮೀಟರ್ ಉದ್ದದ ಮಾನವ ಸರಪಳಿ ನಿರ್ಮಿಸಲು, ಜಿಲ್ಲಾಡಳಿತ ಯೋಜಿಸಿದೆ. ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಈ ಕುರಿತು ಮಾಹಿತಿ ನೀಡಿ, ಮಾನವ ಸರಪಳಿ ನಿರ್ಮಾಣದಲ್ಲಿ, ಎಲ್ಲ ಇಲಾಖೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು, ಉಪನ್ಯಾಸಕರು, ಪ್ರಾಂಶುಪಾಲರು, ಮುಖ್ಯೋಪಾಧ್ಯಾಯರು, ಶಿಕ್ಷಕರು ಕಡ್ಡಾಯವಾಗಿ ಪಾಲ್ಗೊಳ್ಳಲಿದ್ದಾರೆ ಎಂದರು.

<><><>

ಹಾವೇರಿಯಿಂದ ಕೊಪ್ಪಳದ ವರೆಗೆ, ಇದೇ 15 ರಂದು ಬೆಳಗ್ಗೆ 9 ಗಂಟೆಗೆ, ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸಿ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಯಶಸ್ವಿಗೊಳಿಸಲು ಯೋಜಿಸಲಾಗಿದೆ ಎಂದು, ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದ್ದಾರೆ. ಗದಗ ಜಿಲ್ಲೆಯ ಶಿರಹಟ್ಟಿ, ಲಕ್ಷ್ಮೇಶ್ವರ ಹಾಗೂ ಮುಂಡರಗಿ ತಾಲೂಕಿನಲ್ಲಿ ಮಾನವ ಸರಪಳಿ ಹಾದು ಹೋಗಲಿದೆ. ಪ್ರಮುಖ ವೃತ್ತಗಳಲ್ಲಿ ಸಂವಿಧಾನದ ಪೀಠಿಕೆ ಓದಲಾಗುವುದು ಎಂದರು.

<><><>

ಪ್ಲಾಸ್ಟಿಕ್ ಮರು ಬಳಕೆಗೆ ಹೆಚ್ಚಿನ ಒತ್ತು ನೀಡುವ ಅಗತ್ಯವಿದೆ ಎಂದು, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿ 'ಸ್ವಚ್ಛ ಪರಿಸರ ಪ್ರತಿ ಾನ'ವನ್ನು ಉದ್ಘಾಟಿಸಿ ಅವರು, ಮಾತನಾಡಿದರು. ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡುವ ನಿಟ್ಟಿನಲ್ಲಿ ಜನತೆಯಲ್ಲಿ ಜಾಗೃತಿ ಮೂಡಿಸುವುದರೊಂದಿಗೆ, ಅದರಿಂದ ಆಗುವ ಹಾನಿಯ ಬಗ್ಗೆಯೂ ತಿಳಿಹೇಳಬೇಕಿದೆ. ಪ್ಲಾಸ್ಟಿಕ್ ಚೀಲಗಳ ಬದಲು ಪರಿಸರಕ್ಕೆ ಹಾನಿಯಾಗದ ಪರ್ಯಾಯ ಚೀಲಗಳನ್ನು ಬಳಸುವಂತಾಗಬೇಕು ಎಂದು, ಅವರು ಆಶಿಸಿದರು.

<><><>

ಅರಣ್ಯ ರಕ್ಷಣೆಯಲ್ಲಿ ಹುತಾತ್ಮರಾದವರ ಕುಟುಂಬಗಳಿಗೆ ನೀಡಲಾಗುವ ಪರಿಹಾರ ಮೊತ್ತವನ್ನು, 30 ಲಕ್ಷದಿಂದ 50 ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಅರಣ್ಯ ಹುತಾತ್ಮರ ಸ್ಮಾರಕಕ್ಕೆ ಪು ್ಪ ನಮನ ಸಲ್ಲಿಸಿ, ಅವರು, ಮಾತನಾಡಿದರು. ರಾಜ್ಯದ ಅಭಯಾರಣ್ಯಗಳಲ್ಲಿ, ಆನೆ, ಹುಲಿಗಳ ಸಂಖ್ಯೆ ಹೆಚ್ಚುತ್ತಿರುವುದು ಸಂತೋ ’ದ ಸಂಗತಿ. ಆದರೆ, ಮಾನವ ವನ್ಯಪ್ರಾಣಿ ಸಂಘ ೯ ತಪ್ಪಿಸಿ, ಅರಣ್ಯ ಮತ್ತು ಪ್ರಾಣಿ ಸಂಪತ್ತನ್ನು ಕಾಪಾಡುವ ದಿಕ್ಕಿನಲ್ಲಿ, ಪರಿಣಾಮಕಾರಿ ಕೆಲಸಗಳು ಆಗಬೇಕಿವೆ ಎಂದು ಮುಖ್ಯಮಂತ್ರಿ ನುಡಿದರು.

<><><>

ದೇಶದ ಅರಣ್ಯ ಸಂಪತ್ತನ್ನು, ತಮ್ಮ ಪ್ರಾಣ ಪಣಕ್ಕಿಟ್ಟು ರಕ್ಷಿಸುವ ಗುರುತರ ಕಾರ್ಯವನ್ನು, ಅರಣ್ಯ ಇಲಾಖೆ ಸಿಬ್ಬಂದಿ ನಿರ್ವಹಿಸುತ್ತಿದ್ದಾರೆ ಎಂದು, ಕೋಲಾರ ಜಿಲ್ಲಾ ಪ್ರಧಾನ ನ್ಯಾಯಾಧೀಶ ಜಿ.ಎ. ಮಂಜುನಾಥ ಶ್ಲಾಘಿಸಿದ್ದಾರೆ. ಕೋಲಾರ ವಲಯದ ಗಾಜಲದಿನ್ನೆ ಅರಣ್ಯ ವಿಭಾಗದ ಕಚೇರಿಯ ಆವರಣದಲ್ಲಿ ಆಯೋಜಿಸಿದ್ದ, ರಾಷ್ಟ್ರೀಯ ಅರಣ್ಯ ಹುತಾತ್ಮರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಅವರು, ಹುತಾತ್ಮರ ಸ್ಮಾರಕಕ್ಕೆ ಪು ್ಪ ನಮನ ಸಲ್ಲಿಸಿ ಮಾತನಾಡಿದರು. ವನ್ಯಪ್ರಾಣಿ ಮತ್ತು

ಮಾನವ ಸಂಘ ್ಷ, ಅರಣ್ಯ ನಾಶ, ಪ್ರಕೃತಿ ವಿಕೋಪ ಮತ್ತು ದರೋಡೆಕೋರರ ದೋಚುವಿಕೆ ಮಧ್ಯೆ, ಅರಣ್ಯವನ್ನು ಕಾಪಾಡುವುದು ತುಂಬ ಸವಾಲಿನ ಕಾರ್ಯವಾಗಿದೆ ಎಂದರು.

<><><>

ಅರಣ್ಯ ಇಲಾಖೆಯ 61 ಜನ ಸಿಬ್ಬಂದಿ, ಹುತಾತ್ಮರಾಗಿದ್ದು, ರಾಜ್ಯಾದ್ಯಂತ ಅರಣ್ಯ ಇಲಾಖೆಯಿಂದ ಹುತಾತ್ಮರಿಗೆ ಶ್ರದ್ಧಾಂಜಲಿ ಸಭೆಗಳು ಆಯೋಜಿತವಾಗಿದ್ದ ವರದಿಗಳು ಬಂದಿವೆ.

<><><>

ಅರಣ್ಯ ಅಥವಾ ಪ್ರಕೃತಿ ಸಂರಕ್ಷಣೆ ಕೇವಲ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಕೆಲಸ ಮಾತ್ರವಲ್ಲ; ಪ್ರತಿಯೊಬ್ಬ ನಾಗರಿಕನ ಸಂವಿಧಾನ ಬದ್ಧ ಕರ್ತವ್ಯ ಎಂದು, ಬಳ್ಳಾರಿ ಜಿಲ್ಲಾ  ಪ್ರಧಾನ  ನ್ಯಾಯಾಧೀಶರಾದ ಕೆ.ಜಿ ಶಾಂತಿ ಹೇಳಿದ್ದಾರೆ. ಬಳ್ಳಾರಿಯಲ್ಲಿ ಆಯೋಜಿಸಿದ್ದ, ರಾಷ್ಟ್ರೀಯ ಅರಣ್ಯ ಹುತಾತ್ಮರ ಶ್ರದ್ಧಾಂಜಲಿ ಸಭೆಯಲ್ಲಿ ಭಾಗವಹಿಸಿ, ಅವರು ಮಾತನಾಡಿದರು. ಪ್ರಧಾನಮಂತ್ರಿಯವರ ಮಹತ್ವಾಕಾಂಕ್ಷೆಯ, 'ಒಂದು ಗಿಡ, ತಾಯಿಯ ಹೆಸರಲ್ಲಿ' ಅಭಿಯಾನ, ಸಾರ್ವಜನಿಕರಲ್ಲಿ ಪರಿಸರ ಜವಾಬ್ದಾರಿಯನ್ನು ಜ್ಞಾಪಿಸಲು ಸಹಕಾರಿಯಾಗಿದೆ ಎಂದರು.

<><><>

ಮಂಡ್ಯದಲ್ಲಿ ಆಯೋಜಿತ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರತಿನಿಧಿಗಳಿಗೆ, ಹೆಸರು ನೋಂದಾಯಿಸಲು ನೂತನ ಆಪ್ ಸಿದ್ಧ ಪಡಿಸಲಾಗಿದೆ ಎಂದು ನೋಂದಣಿ ಮತ್ತು ಸ್ವಚ್ಛತಾ ಸಮಿತಿ ಅಧ್ಯಕ್ಷ ಹಾಗೂ ಶಾಸಕ ಹೆಚ್.ಟಿ.ಮಂಜು ತಿಳಿಸಿದ್ದಾರೆ.  ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನೋಂದಣಿ ಹಾಗೂ ಸ್ವಚ್ಛತಾ ಸಮಿತಿ ಸಭೆಯಲ್ಲಿ ಅವರು, ಮಾತನಾಡಿದರು. ನೋಂದಾಯಿತ ಪ್ರತಿನಿಧಿಗಳಿಗೆ ಸಮ್ಮೇಳನದ ವತಿಯಿಂದ ನೀಡಲಾಗುವ ಕೊಡುಗೆಗಳನ್ನು ಜಿಲ್ಲಾವಾರು ಕೌಂಟರ್‌ಗಳನ್ನು ತೆರೆದು ವಿತರಿಸಲು ಸಿದ್ಧತೆ ಮಾಡಿಕೊಳ್ಳಲಾಗುವುದು. ಮಂಡ್ಯದ ಬೆಲ್ಲ ಮತ್ತು ಸಕ್ಕರೆಯನ್ನು ವಿತರಿಸಲು ಚಿಂತನೆ ನಡೆದಿದೆ ಎಂದರು.

<><><>

ಹಿಂದಿನ ನ್ಯೂನತೆಗಳನ್ನು ಸರಿಪಡಿಸಿಕೊಂಡು ಈ ಬಾರಿ, ಅರ್ಥಪೂರ್ಣ ದಸರಾ ಮಹೋತ್ಸವ ಆಚರಣೆ ಮಾಡಲಾಗುವುದು. ನಾಡಿನ ಕಲೆ ಹಾಗೂ ಸಂಸ್ಕೃತಿಗಳನ್ನು ರಾಷ್ಟಕ್ಕೆ ತಿಳಿಸುವ ಮಾದರಿಯಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಹಾಗೂ ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹದೇವಪ್ಪ ತಿಳಿಸಿದ್ದಾರೆ. ಐತಿಹಾಸಿಕ ದಸರಾ ಮಹೋತ್ಸವ ಆಚರಣೆಗೆ ಖಾಸಗಿ ಸಹಭಾಗಿತ್ವದ ಕುರಿತಂತೆ ಹಿರಿಯ ಅಧಿಕಾರಿಗಳು ಹಾಗೂ ವಿವಿಧ ಸಂಸ್ಥೆಗಳ ಪ್ರಮುಖರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಗದಗ ಜಿಲ್ಲೆ, ನಾಗಾವಿಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ  ವಿಶ್ವವಿದ್ಯಾಲಯದ ಆವರಣದಲ್ಲಿ, ವಿಶ್ವ ಚೇತನ ಸ್ವಾಮಿ ವಿವೇಕಾನಂದರ, 39 ದಶಾಂಶ 5 ಅಡಿ ಎತ್ತರದ, ಕಂಚಿನ ಪುತ್ಥಳಿಯನ್ನು, ವಿಧಾನ ಪರಿ ್ತ್ ಸಭಾಪತಿ ಬಸವರಾಜ ಹೊರಟ್ಟಿ ಅನಾವರಣ ಗೊಳಿಸಿದರು.

<><><>

**ಬಾಗಲಕೋಟೆ ಜಿಲ್ಲೆ, ಮುಧೋಳ ತಾಲೂಕಿನಲ್ಲಿ, ಕಬ್ಬು ವಾಣಿಜ್ಯ ಬೆಳೆಯಾಗಿದ್ದು, ಪರ್ಯಾಯವಾಗಿ ತೋಟಗಾರಿಕೆ ಬೆಳೆ, ತಾಳೆಯನ್ನು ಬೆಳೆಯಲು, ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಎಲ್ಲ ಅನುಕೂಲ ಕಲ್ಪಿಸಲಾಗುವುದು ಎಂದು, ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ತಿಳಿಸಿದ್ದಾರೆ.**

<><><>